# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2024-25ನೇ ಸಾಲಿನ ಆಯವ್ಯಯ ಭಾಷಣದ "ಕಂಡಿಕೆ ಸಂಖ್ಯೆ:194" ರಲ್ಲಿ ಘೋಷಿಸಿರುವಂತೆ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ ರೂ.200.00 ಕೋಟಿ ಒದಗಿಸುವ ಬಗ್ಗೆ.

ಓದಲಾಗಿದೆ:
1. 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ:194
2. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 175 ವೆಚ್ಚ-3/2024 ದಿನಾಂಕ23/04/2024.
3. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಇ-ಕಛೇರಿ ಕಡತ ಸಂಖ್ಯೆ:DOM/DEVP/JSD/15/2024.

ಪ್ರಸ್ತಾವನೆ:-

ಮೇಲೆ ಓದಲಾದ (1)ರ 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ -194 ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.

***"ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ 200.00 ಕೋಟಿ ರೂ. ಒದಗಿಸಲಾಗುವುದು".***

ಮೇಲಿನ ಆಯವ್ಯಯ ಘೋಷಣೆಯು ಮುಂದುವರೆದ ಮಾರ್ಪಾಡಿತ ಯೋಜನೆಯಾಗಿದ್ದು, ಸದರಿ ಕಾರ್ಯಕ್ರಮವನ್ನು ಪ್ರಸಕ್ತ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ:2225-04-102-0-04(059)ರಡಿ ಕ್ರೈಸ್ತ ಸಮುದಾಯಗಳ ಅಭಿವೃದ್ಧಿ ಯೋಜನೆಯಡಿ ನಿಗಮಕ್ಕೆ ಹಂಚಿಕೆ ಮಾಡಿರುವ ರೂ.8500.00 ಲಕ್ಷಗಳ ಅನುದಾನದ ಮಿತಿಯಲ್ಲಿಯೇ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ ಹಾಗೂ ವಿವಿಧ ಕಾರ್ಯಕ್ರಮಗಳಗನ್ನು ಕೈಗೊಳ್ಳುವಂತೆ ಮೇಲೆ ಓದಲಾದ (2)ರಲ್ಲಿನ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-194ರಲ್ಲಿರುವಂತೆ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ ನಿಗಮಕ್ಕೆ ಲೆಕ್ಕಶೀರ್ಷಿಕೆ:2225-04-102-0-04(059) ರಡಿ ಹಂಚಿಕೆಯಾದ ಒಟ್ಟು ರೂ.8500.00 ಲಕ್ಷಗಳ ಅನುದಾನದಲ್ಲಿ ಪ್ರಸಕ್ತ ಸಾಲಿನಲ್ಲಿ ಈಗಾಗಲೇ ನಿರ್ದೇಶನಾಲಯದಿಂದ ಕ್ರಿಶ್ಚಿಯನ್ ಸಮುದಾಯದವರಿಗೆ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳಿಗೆ ಅನುದಾನ ಬಿಡುಗಡೆ ಮಾಡಲು ರೂ.4000.00 ಲಕ್ಷಗಳು ಬದ್ಧ ಹೊಣೆಗಾರಿಕೆಗೆ (Committed) ಮತ್ತು ಹೊಸ ಪ್ರಸ್ತಾವನೆಗಳಿಗೆ ರೂ.2000.00 ಲಕ್ಷಗಳನ್ನು ಹಾಗೂ ಕ್ರಿಶ್ಚಿಯನ್ ಸಮುದಾಯದವರಿಗೆ ಈಗಾಗಲೇ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸುತ್ತಿರುವ ಈ ಕೆಳಕಂಡ ಯೋಜನೆಗಳನ್ನು ಕ್ರಿಶ್ಚಿಯನ್ ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸಲು ರೂ.2500.00 ಲಕ್ಷಗಳು ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಮೇಲೆ ಓದಲಾದ (3)ರಲ್ಲಿನ ಏಕಕಡತದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

...2

Scanned with OKEN Scanner

| ಕ್ರ. ಸಂ | ವಿಷಯ | ಬೇಕಾಗುವ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1. | 'ಅರಿವು' (ವಿದ್ಯಾಭ್ಯಾಸ ಸಾಲ)ಸಾಲ ಯೋಜನೆ | 2500.00 |
| 2. | ಸ್ವಾವಲಂಬಿ ಸಾರಥಿ ಯೋಜನೆ | |
| 3. | 'ಶ್ರಮಶಕ್ತಿ' ಯೋಜನೆ/ ವೃತ್ತಿ ಪ್ರೋತ್ಸಾಹ ಯೋಜನೆ | |
| 4. | ಗಂಗಾ ಕಲ್ಯಾಣ ಯೋಜನೆ | |
| 5. | ಶ್ರಮಶಕ್ತಿ (ವಿಶೇಷ ಮಹಿಳಾ) ಯೋಜನೆ | |
| 6. | ವಿದೇಶಿ ವಿದ್ಯಾಭ್ಯಾಸ ಸಾಲ ಯೋಜನೆ | |
| 7. | ಸಮುದಾಯ ಆಧಾರಿತ ತರಬೇತಿ ಯೋಜನೆ | |
| | ಒಟ್ಟು | 2500.00 |

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD-MDS/208/2024, ಬೆಂಗಳೂರು ದಿ:07-06-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-194ರ ಘೋಷಣೆಯಂತೆ ಕ್ರೈಸ್ತ ಸಮುದಾಯದ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ ಕೆಳಕಂಡ ಕಾರ್ಯಕ್ರಮಗಳನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯದ ಮುಖಾಂತರ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ. ಸಂ | ಯೋಜನೆ/ಕಾರ್ಯಕ್ರಮದ ವಿವರ | ಅಂದಾಜು ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1. | ಬದ್ಧ ಹೊಣೆಗಾರಿಕೆಗಳು (Committed) | 4000.00 |
| 2. | ಹೊಸ ಪ್ರಸ್ತಾವನೆಗಳು | 2000.00 |
| 3. | ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸುತ್ತಿರುವ ಈ ಕೆಳಕಂಡ ಯೋಜನೆಗಳನ್ನು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಮಾರ್ಗಸೂಚಿಗಳನ್ವಯ ಕರ್ನಾಟಕ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸಲು.<br>a. 'ಅರಿವು' (ವಿಧ್ಯಾಭ್ಯಾಸ ಸಾಲ)ಸಾಲ ಯೋಜನೆ<br>b. ಸ್ವಾವಲಂಬಿ ಸಾರಥಿ ಯೋಜನೆ<br>c. 'ಶ್ರಮಶಕ್ತಿ' ಯೋಜನೆ/ ವೃತ್ತಿ ಪ್ರೋತ್ಸಾಹ ಯೋಜನೆ<br>d. ಗಂಗಾ ಕಲ್ಯಾಣ ಯೋಜನೆ<br>e. ಶ್ರಮಶಕ್ತಿ(ವಿಶೇಷ ಮಹಿಳಾ) ಯೋಜನೆ<br>f. ವಿದೇಶಿ ವಿಧ್ಯಾಭ್ಯಾಸ ಸಾಲ ಯೋಜನೆ<br>g. ಸಮುದಾಯ ಆಧಾರಿತ ತರಬೇತಿ ಯೋಜನೆ | 2500.00 |
| | ಒಟ್ಟು | 8500.00 |

....3

Scanned with OKEN Scanner

ಈ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ: 2225-04-102-0-04(059) ರಡಿ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ ಯೋಜನೆಯಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

7/6/2024.

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು
ವಕ್ಫ್ ಇಲಾಖೆ

ಗೆ:

1. ಪ್ರಧಾನ ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು, (ನಿರ್ದೇಶಕರ ಮುಖಾಂತರ)
5. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, (ನಿರ್ದೇಶಕರ ಮುಖಾಂತರ)
6. ಎಲ್ಲಾ ಜಿಲ್ಲೆಯ ಖಜಾನಾಧಿಕಾರಿಗಳು, (ನಿರ್ದೇಶಕರ ಮುಖಾಂತರ)
7. ನಿರ್ದೇಶಕರು, ಯೋಜನಾ ಇಲಾಖೆ, ಪಿಎಂಐ ವಿಭಾಗ, ಬಹುಮಹಡಿ ಕಟ್ಟಡ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಶೇಷಾದ್ರಿಪುರಂ, ಬೆಂಗಳೂರು.
9. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, (ನಿರ್ದೇಶಕರ ಮುಖಾಂತರ)
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9), ವಿಧಾನಸೌಧ, ಬೆಂಗಳೂರು.
11. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
13. ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ ಕೇಂದ್ರ (24x7) ವಸಂತನಗರ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with OKEN Scanner